ಗುಬ್ಬಿ ತಾಲ್ಲೂಕಿನಲ್ಲಿನ ವಿದ್ಯುತ್ ಅಭಾವವನ್ನು ಹೋಗಲಾಡಿಸುವ ಬಗ್ಗೆ

698 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗುಬ್ಬಿ ತಾಲ್ಲೂಕು ಹಾಗಲವಾಡಿ ಪ್ರದೇಶವಲ್ಲಿ ಇತ್ತೀಚೆಗೆ ವಿದ್ಯುಚ್ಛಕ್ತಿ ಸರಬರಾಜಿನ ತೊಂದರೆಯಿಂದ ಅನೇಕ ದಿನಗಳಿಂದ ಜನರು ಕತ್ತಲಲ್ಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಆ ಪ್ರದೇಶಕ್ಕೆ ವಿದ್ಯುಚ್ಛಕ್ತಿ ಸರಬರಾಜು ಬಲಪಡಿಸಲು ಇಲಾಖೆಯು ಹಾಕಿಕೊಂಡಿರುವ ಕಾರ್ಯಕ್ರಮವೇನು?*

ಇ) *ಗುಬ್ಬಿ ತಾಲ್ಲೂಕಿನ ಹೊಸಕೆರೆಗೆ ಒಂದು ಉಪ ವಿದ್ಯುತ್ ಸ್ಥಾವರ (ಸಬ್ ಸ್ಟೇಷನ್) ಮಂಜೂರಾಗಿದ್ದು, ಇದುವರೆಗೂ ಕಾರ್ಯಗತಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ, ಹಾಗಲವಾಡಿ ಹೋಬಳಿಯಲ್ಲಿ ವಿದ್ಯುತ್ ಅಭಾವ, ಓಲ್ಟೇಜ್ ವಿರುಪೇರು ಸರಿಪಡಿಸಲು ಸರ್ಕಾರದ ನಿರ್ದಿಷ್ಟ ಕ್ರಮ ಮತ್ತು ಯೋಜನೆಗಳೇನು?*

ಶ್ರೀ ಕೆ.ಎ. ನಿಸಾರ್ ಅಹಮದ್ (ಇಂಧನ ರಾಜ್ಯ ಸಚಿವರು) :

ಅ) ಹೌದು

ಆ) ಹಾಲಿ ಹಾಗಲವಾಡಿ ಪ್ರದೇಶಕ್ಕೆ ಚಿಕ್ಕನಾಯಕನಹಳ್ಳಿಯಲ್ಲಿರುವ 110:11 ಕೆ.ವಿ. ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜಾಗುತ್ತಿರುವುದರಿಂದ ವಿದ್ಯುತ್ ಸರಬರಾಜಿನಲ್ಲಿ ಆಗಾಗ್ಗೆ ಅಡಚಣೆಯುಂಟಾಗುತ್ತಿದೆ. ಇದರ ನಿವಾರಣೆಗಾಗಿ ಗುಬ್ಬಿ ತಾಲ್ಲೂಕಿನ ನಿಟ್ಟೂರಿನಲ್ಲಿರುವ 110:11 ಕೆವಿ ವಿದ್ಯುತ್ ಉಪಕೇಂದ್ರದಿಂದ ಹಾಗಲವಾಡಿ ಪ್ರದೇಶಕ್ಕೆ ವಿದ್ಯುತ್ ಸರಬರಾಜನ್ನು ವಿಸ್ತಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಇಲ್ಲ. ಈ ಸಂಬಂಧದ ಪ್ರಸ್ತಾವನೆಯು ಮಂಡಳಿಯ ಪರಿಶೀಲನೆಯಲ್ಲಿದೆ.

ಈ) ಪ್ರಶ್ನೆಯ 'ಅ' ಭಾಗದ ಉತ್ತರದಲ್ಲಿ ತಿಳಿಸಿರುವಂತೆ ಹಾಗಲವಾಡಿ ಪ್ರದೇಶಕ್ಕೆ ನಿಟ್ಟೂರಿನಲ್ಲಿರುವ 110:11 ಕೆವಿ ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜನ್ನು ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ನಿಟ್ಟೂರಿನಿಂದ ಹಾಗಲವಾಡಿಗೆ ಒಂದು 11 ಕೆವಿ ಎಕಸ್ಪ್ರೆಸ್ ಫೀಡರ್ ಅನ್ನು ನಿರ್ಮಾಣ ಮಾಡಲಾಗುತ್ತಿದ್ದು, ಕೆಲಸವು ಪ್ರಗತಿಯಲ್ಲಿದೆ. ಈ ಕಾರ್ಯವು ಪೂರ್ಣಗೊಂಡ ನಂತರ ಹಾಗಲವಾಡಿ ಪ್ರದೇಶದಲ್ಲಿ ವಿದ್ಯುತ್ ಸರಬರಾಜಿನ ಪರಿಸ್ಥಿತಿಯು ಸುಧಾರಣೆಗೊಳ್ಳುವುದು.

ವಿತ ನೀರಾವರಿ ನಿಗಮಗಳನ್ನು ಮುಚ್ಚುವ ಬಗ್ಗೆ

657 - ಶ್ರೀ ಗುರುಪಾದಪ್ಪ ನಾಗಮಾರಹಳ್ಳಿ (ಜೆರಾದ್) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಎಲ್ಲೆಲ್ಲಿ ವಿತ ನೀರಾವರಿ ನಿಗಮವನ್ನು ಸ್ಥಾಪಿಸಲಾಗಿದೆ?*

ಆ) *ಅವುಗಳನ್ನು ಯಾವಾಗ ಸ್ಥಾಪಿಸಲಾಯಿತು?*

ಇ) *ಅವುಗಳನ್ನು ಯಾವ ಉದ್ದೇಶಗಳನ್ನಿಟ್ಟುಕೊಂಡು ಸ್ಥಾಪಿಸಲಾಯಿತು?*

ಈ) *ಆದಕ್ಕೆ ಹೂಡಲಾಗಿರುವ ಬಂಡವಾಳವೆಷ್ಟು?*

ಉ) *ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದ ಸಂಖ್ಯೆಯೆಷ್ಟು?*

ಊ) *ನಿಗಮ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಸಿಬ್ಬಂದಿ ವರ್ಗಕ್ಕೆ ಸಂಬಳ ಮತ್ತು ಇತರೆ ಭತ್ಯೆಗಳಿಗಾಗಿ ಪ್ರತಿವರ್ಷ ವೆಚ್ಚ ಮಾಡಲಾಗುತ್ತಿರುವ ಹಣವೆಷ್ಟು?*